# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಂಡ್ಯ.
## ಗುಮಾಸ್ತ ವ. ಬೆರಳಚ್ಚುಗಾರ ಹುದ್ದೆಗಳ ನೇಮಕಾತಿ ಪ್ರಕಟಣೆ

ಮಾನ್ಯ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ **03/ಎಡಿಎಂ/2007** ದಿನಾಂಕ **04.08.15** ರ ಅನ್ವಯ ಮಂಡ್ಯ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಹೆಚ್ಚುವರಿಯಾಗಿ ಒಂದು ಗುಮಾಸ್ತ ವ. ಬೆರಳಚ್ಚುಗಾರ ಹುದ್ದೆಯನ್ನು ಸೃಜಿಸಿದ್ದು ಸದರಿ ಗುಮಾಸ್ತ ವ. ಬೆರಳಚ್ಚುಗಾರ ಹುದ್ದೆಗಳನ್ನು ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಗುಮಾಸ್ತ ವ. ಬೆರಳಚ್ಚುಗಾರರ ಒಟ್ಟು ಹುದ್ದೆಗಳ ಸಂಖ್ಯೆ : **06**

ತಾಲ್ಲೂಕು ಕಾನೂನು ಸೇವಾ ಸಮಿತಿ, ಮಳವಳ್ಳಿ – **01** ಹುದ್ದೆ.
ತಾಲ್ಲೂಕು ಕಾನೂನು ಸೇವಾ ಸಮಿತಿ, ಮದ್ದೂರು – **01** ಹುದ್ದೆ.
ತಾಲ್ಲೂಕು ಕಾನೂನು ಸೇವಾ ಸಮಿತಿ, ನಾಗಮಂಗಲ – **01** ಹುದ್ದೆ.
ತಾಲ್ಲೂಕು ಕಾನೂನು ಸೇವಾ ಸಮಿತಿ, ಪಾಂಡವಪುರ – **01** ಹುದ್ದೆ.
ತಾಲ್ಲೂಕು ಕಾನೂನು ಸೇವಾ ಸಮಿತಿ, ಶ್ರೀರಂಗಪಟ್ಟಣ – **01** ಹುದ್ದೆ.
ತಾಲ್ಲೂಕು ಕಾನೂನು ಸೇವಾ ಸಮಿತಿ, ಕೆ.ಆರ್.ಪೇಟೆ – **01** ಹುದ್ದೆ.

<u>ಅರ್ಹತೆಗಳು :-</u>

೧. ಎಸ್.ಎಸ್.ಎಲ್.ಸಿ ಉತ್ತೀರ್ಣ ಹೊಂದಿರಬೇಕು.

೨. ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಕಿರಿಯ ದರ್ಜೆ ಉತ್ತೀರ್ಣ ಹೊಂದಿರಬೇಕು ಹಾಗೂ ಕಂಪ್ಯೂಟರ ಜ್ಞಾನ ಹೊಂದಿರಬೇಕು.

೩. ಸ್ಥಳೀಯ ಅಭ್ಯರ್ಥಿಗಳಿಗೆ ಮೊದಲನೇ ಅದ್ಯತೆ ಹಾಗೂ ಬೆರಳಚ್ಚುಗಾರರಾಗಿ ಕಾರ್ಯ ನಿರ್ವಹಿಸಿ ಅನುಭವ ಉಳ್ಳ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

<u>ಮಾಸಿಕ ಗೌರವಧನ/ವೇತನ :-</u>

ಮಾಸಿಕ **4000/-** (ನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗೌರವಧನ ನೀಡಲಾಗುವುದು.

<u>ನೇಮಕಾತಿ ಅವಧಿ:-</u>

ಸದರಿ ಹುದ್ದೆಗಳ ನೇಮಕಾತಿಯು ಒಂದು ವರ್ಷದ ಅವಧಿಗೆ ಪೂರ್ಣ ಪ್ರಮಾಣದಲ್ಲಿ ತಾತ್ಕಾಲಿಕ ನೇಮಕಾತಿಯಾಗಿದ್ದು, ಮಾನ್ಯ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ರವರು ಕಾಲಕಾಲಕ್ಕೆ ಹೊರಡಿಸಬಹುದಾದ ನಿರ್ದೇಶನಗಳನ್ನು ಪಾಲಿಸಲಾಗುವುದು.

<u>ಅರ್ಜಿ ಸಲ್ಲಿಸಬೇಕಾದ ವಿಳಾಸ:-</u>

ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ (ನ್ಯಾಯಾಲಯದ ಆವರಣ), ಮಂಡ್ಯ ರವರಿಗೆ ಸಲ್ಲಿಸುವುದು.

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 07.01.2017 ಸಂಜೆ 05.00 ಗಂಟೆಗೆ.**

ಅಧ್ಯಕ್ಷರು,
ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,
ಮಂಡ್ಯ